ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : (20) 54
ಸದಸ್ಯರ ಹೆಸರು : ಶ್ರೀ ಎನ್.ರವಿಕುಮಾರ್.
ಉತ್ತರಿಸುವ ದಿನಾಂಕ : 15.07.2019
ಉತ್ತರಿಸುವವರು : ಸಮಾಜ ಕಲ್ಯಾಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುತ್ತಿರುವ ವಿದ್ಯಾರ್ಥಿನಿಯರ 15 ಹಾಸ್ಟೆಲ್‌ಗಳಲ್ಲಿ ಪುರುಷ ವಾರ್ಡನ್‌ಗಳಿದ್ದು, ಪುರುಷ ವಾರ್ಡನ್‌ಗಳಿಂದ ವಿದ್ಯಾರ್ಥಿನಿಯರ ಮೇಲೆ ದೌರ್ಜನ್ಯ ನಡೆದಿರುವ ಕುರಿತು ವರದಿಯಾಗಿರುವ ಪ್ರಕರಣಗಳು ಎಷ್ಟು; ಹಾಗಿದ್ದಲ್ಲಿ, ಈ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿನಿಯರ ರಕ್ಷಣೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ?	ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಿದ್ಯಾರ್ಥಿನಿಯರ ಹಾಸ್ಟೆಲ್‌ಗಳಲ್ಲಿ ಪುರುಷ ವಾರ್ಡನ್‌ಗಳಿಂದ ವಿದ್ಯಾರ್ಥಿನಿಯರ ಮೇಲೆ ದೌರ್ಜನ್ಯ ನಡೆದಿರುವ ಪ್ರಕರಣಗಳು ವರದಿಯಾಗಿರುವುದಿಲ್ಲ. ವಿದ್ಯಾರ್ಥಿನಿಯರ ವಸತಿ ನಿಲಯಗಳ ಭದ್ರತಾ ದೃಷ್ಟಿಯಿಂದ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ. 1. ವಿದ್ಯಾರ್ಥಿನಿಯರ ವಸತಿ ನಿಲಯಗಳಿಗೆ ಮಹಿಳಾ ಮೇಲ್ವಿಚಾರಕರನ್ನೇ ನೇಮಿಸಲಾಗಿದೆ. 2. ನಿಲಯಾರ್ಥಿಗಳ ಹಿತದೃಷ್ಟಿಯಿಂದ ರಾತ್ರಿ ಕಾವಲುಗಾರರನ್ನು ನೇಮಿಸಲಾಗಿದೆ. 3. ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆರವರು ಆಗಿಂದ್ದಾಗೆ ನಿಲಯಗಳಿಗೆ ಭೇಟಿ ನೀಡಿ ಮೇಲ್ವಿಚಾರಣೆ ನಡೆಸುತ್ತಿರುತ್ತಾರೆ. 4. ಪ್ರತಿಯೊಂದು ಮಹಿಳಾ ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಥಿ ನಿಲಯದ ಸುರಕ್ಷತಾ ಸಮಿತಿಗಳನ್ನು ರಚಿಸಿದ್ದು, ವಿದ್ಯಾರ್ಥಿನಿಯರ ಸುರಕ್ಷತೆ ಬಗ್ಗೆ ನಿಗಾ ವಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. 5. ವಿದ್ಯಾರ್ಥಿನಿಯರ ನಿಲಯಗಳ ಬಳಿ ರಾತ್ರಿ ವೇಳೆ ಗಸ್ತು ಹೋಗಿಬರಲು ಪೋಲೀಸ್ ಇಲಾಖೆಯವರನ್ನು ಕೋರಲಾಗಿದೆ. 6. ವಿದ್ಯಾರ್ಥಿ ನಿಲಯಗಳ ಸುತ್ತ ಭದ್ರತೆಯ ದೃಷ್ಟಿಯಿಂದ ಕಾಂಪೌಂಡ್ ನಿರ್ಮಿಸಲಾಗಿದೆ.
(ಆ)	ವಿದ್ಯಾರ್ಥಿನಿಯರ ಹಾಸ್ಟೆಲ್‌ಗಳಿಗೆ ಮಹಿಳಾ ವಾರ್ಡನ್‌ಗಳನ್ನು ನೇಮಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?	ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಿದ್ಯಾರ್ಥಿನಿಯರ ಹಾಸ್ಟೆಲ್‌ಗಳಿಗೆ ಮಹಿಳಾ ವಾರ್ಡನ್‌ಗಳನ್ನೇ ನೇಮಿಸಲಾಗುತ್ತದೆ.

ಸಕಇ 89 ಪಕಸೇ 2019

(ಪ್ರಿಯಾಂಕ್ ಖರ್ಗೆ)
ಸಮಾಜ ಕಲ್ಯಾಣ ಸಚಿವರು.